ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22343904/05 | ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು-560001.

ಸಂಖ್ಯೆ:ಕಾಶಿಇ/ಶೈವಿ/37/ಕಾರ್ಯಾಗಾರ/2017-18 | ದಿನಾಂಕ:20.07.2017

## ಅಧಿಕೃತ ಜ್ಞಾಪನ

ವಿಷಯ: ಬಾಬಾಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ರವರ 126ನೇ ವರ್ಷಾಚರಣೆಯ ಅಂಗವಾಗಿ ದಿನಾಂಕ:21-07-2017 ರಿಂದ 23-07-2017 ರವರೆಗೆ ಆಯೋಜಿಸಲಾಗಿರುವ ಅಂತರಾಷ್ಟ್ರೀಯ ಸಮ್ಮೇಳನಕ್ಕೆ ಹಾಜರಾಗುವ ಅಧ್ಯಾಪಕರುಗಳಿಗೆ ಅನ್ಯಕಾರ್ಯನಿಮಿತ್ತ ರಜೆ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 106 ವಿವಿಧ 2017. ದಿನಾಂಕ:12-07-2017 ಮತ್ತು 17-07-2017.
2) ಈ ಕಛೇರಿ ಸುತ್ತೋಲೆ ಸಂಖ್ಯೆ:ಕಾಶಿಇ/ಶೈವಿ/25/ಸುತ್ತೋಲೆ/2011-12. ದಿನಾಂಕ: 22/12/2010.

* * * * * * * *

ಬಾಬಾಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ರವರ 126ನೇ ವರ್ಷಾಚರಣೆಯ ಅಂಗವಾಗಿ ಅವರ ಚಿಂತನೆಗಳು, ಕೊಡುಗೆಗಳನ್ನು ಹಾಗೂ ಸಮಾನತೆಯ ಪರಿಕಲ್ಪನೆಯನ್ನು ಸಾರ್ವಜನಿಕರಿಗೆ ತಲುಪಿಸುವ ನಿಟ್ಟಿನಲ್ಲಿ ಸರ್ಕಾರದ ವತಿಯಿಂದ ದಿನಾಂಕ:21-07-2017 ರಿಂದ 23-07-2017 ರವರೆಗೆ ಬೆಂಗಳೂರಿನ ಜಿ.ಕೆ.ವಿ.ಕೆ. ಸಭಾಂಗಣದಲ್ಲಿ 3 ದಿನಗಳ ಅಂತರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಾಗಿದೆ. ಈ ಸಮ್ಮೇಳನಕ್ಕಾಗಿ ಸೃಜಿಸಿರುವ ವೆಬ್‌ಸೈಟ್ ಮುಖಾಂತರ ನೋಂದಣಿ ಮಾಡಿಕೊಂಡು, ಸದರಿ ಸಮ್ಮೇಳನಕ್ಕೆ ಹಾಜರಾಗುವ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಅಧ್ಯಾಪಕರುಗಳಿಗೆ ಉಲ್ಲೇಖ-(3)ರಲ್ಲಿನ ಷರತ್ತುಗಳಿಗೊಳಪಟ್ಟು ಅನುಮತಿ ನೀಡಲಾಗಿದೆ ಹಾಗೂ ಸದರಿ ಸಮ್ಮೇಳನದಲ್ಲಿ ಭಾಗವಹಿಸಿದ ಬಗ್ಗೆ ನೋಂದಣಿ ಮತ್ತು ಹಾಜರಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಅಧಿಕಾರಿ/ಪ್ರಾಂಶುಪಾಲರಿಗೆ ಒಪ್ಪಿಸುವ ನಿಬಂದನೆಗೊಳಪಟ್ಟು ಸದರಿ ದಿನಗಳಿಗೆ ಸರ್ಕಾರ/ಇಲಾಖಾ ವತಿಯಿಂದ ಯಾವುದೇ ರೀತಿಯ ಭತ್ಯೆಗಳಿಲ್ಲದೆ ಅನ್ಯಕಾರ್ಯನಿಮಿತ್ತ ರಜೆಯನ್ನು ಮಂಜೂರು ಮಾಡಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ:**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2. ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾ.ಶಿ.ಆ. ಕಛೇರಿ, ಬೆಂಗಳೂರು - ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
4. ಕಛೇರಿ ಪ್ರತಿ.